## ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 8 (ಶಿಕ್ಷಣ ಇಲಾಖೆಯಿಂದ ವರ್ಗಾಯಿತ ಪ್ರಶ್ನೆ) |
| ಸದಸ್ಯರ ಹೆಸರು | : | ಶ್ರೀ ಎಸ್. ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 19-12-2022 |
| ಉತ್ತರಿಸುವ ಸಚಿವರು | : | ಲೋಕೋಪಯೋಗಿ ಸಚಿವರು |

| ಕ್ರಮ ಸಂಖ್ಯೆ | ಪ್ರಶ್ನೆಗಳು | ಉತ್ತರಗಳು |
|---|---|---|
| ಅ | ದೇವನಹಳ್ಳಿ ತಾಲ್ಲೂಕಿನ ವಿಶ್ವನಾಥಪುರ ಗ್ರಾಮದ ಎನ್.ಹೆಚ್-207 ರಸ್ತೆಯ ಪಕ್ಕದಲ್ಲಿರುವ ಕರ್ನಾಟಕ ಪಬ್ಲಿಕ್ ಶಾಲೆಗೆ ದಿನನಿತ್ಯ 600 ಕ್ಕೂ ಹೆಚ್ಚು ವಿದ್ಯಾರ್ಥಿಗಳು ನಡೆದುಕೊಂಡು ಅಥವಾ ಸೈಕಲ್ ಮೂಲಕ ಹೋಗಿಬರುತ್ತಿದ್ದು, ಇಲ್ಲಿ ಅಂಡರ್‌ಪಾಸ್ ಅಥವಾ ಸ್ಕೈ ವಾಕರ್ ಇಲ್ಲದಿರುವುದರಿಂದ ಶಾಲೆಗೆ ಹೋಗುವಾಗ ಮತ್ತು ಶಾಲೆ ಬಿಟ್ಟ ನಂತರ ರಾಷ್ಟ್ರೀಯ ಹೆದ್ದಾರಿಯ ರಸ್ತೆ ದಾಟಲು ವಿದ್ಯಾರ್ಥಿಗಳು ತೊಂದರೆಪಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ರಾಷ್ಟ್ರೀಯ ಹೆದ್ದಾರಿ 207 ಭಾರತೀಯ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಕಾರ್ಯವ್ಯಾಪ್ತಿಗೆ ಒಳಪಡುತ್ತದೆ. ಸದರಿ ಹೆದ್ದಾರಿಯ ಕಿ.ಮೀ. 46.25 ರಿಂದ ಕಿ.ಮೀ. 46.38 ರ ವಿಶ್ವನಾಥಪುರ ಹಳ್ಳಿಯಲ್ಲಿ ಕರ್ನಾಟಕ ಪಬ್ಲಿಕ್ ಶಾಲೆಯು ಸ್ಥಾಪಿತವಾಗಿರುತ್ತದೆ.<br><br>ಸದರಿ ಹೆದ್ದಾರಿಯ ಅಭಿವೃದ್ಧಿ ಕಾಮಗಾರಿಯ ಕರಾರು ರಿಯಾಯಿತಿ ಒಪ್ಪಂದದಂತೆ ಕಿ.ಮೀ.47.940 ರಲ್ಲಿ ವಾಹನ ಕೆಳ ಸೇತುವೆ, ಕಿ.ಮೀ.46.900 ರಿಂದ ಕಿ.ಮೀ. 48.300 ಮತ್ತು ಕಿ.ಮೀ.43.700 ರಿಂದ ಕಿ.ಮೀ. 44.740ರ ಎರಡೂ ಭಾಗದಲ್ಲಿ ಸರ್ವೀಸ್ ರಸ್ತೆ ಮತ್ತು ಕಿ.ಮೀ. 46.265 ರಲ್ಲಿ ಕಿರು ಸೇತುವೆ ನಿರ್ಮಾಣ ಮಾಡಲು ಅವಕಾಶ ಕಲ್ಪಿಸಲಾಗಿದ್ದು, ಪ್ರಸ್ತುತ ಕಾಮಗಾರಿ ಪ್ರಗತಿಯಲ್ಲಿದೆ. |
| ಆ | ಬಂದಿದ್ದಲ್ಲಿ, ವಿದ್ಯಾರ್ಥಿಗಳಿಗೆ ರಾಷ್ಟ್ರೀಯ ಹೆದ್ದಾರಿಯ ರಸ್ತೆ ದಾಟಲು ಸ್ಕೈ ವಾಕರ್ ಅಥವಾ ಅಂಡರ್‌ಪಾಸ್ ನಿರ್ಮಾಣ ಮಾಡುವ ಯೋಜನೆ ಸರ್ಕಾರದ ಮುಂದಿದೆಯೇ; ಇದ್ದಲ್ಲಿ, ಯಾವ ಕಾಲಮಿತಿಯೊಳಗೆ ನಿರ್ಮಾಣ ಮಾಡಲಾಗುವುದು? (ವಿವರ ನೀಡುವುದು) | ಮುಂದುವರೆದು, ಕಿ.ಮೀ.47.660 ರಲ್ಲಿ ಪಾದಚಾರಿ ಕೆಳ ಸೇತುವೆ ಮತ್ತು ಕಿ.ಮೀ. 48.300 ರಲ್ಲಿ ಪಾದಚಾರಿ ಮೇಲ್ಸೇತುವೆ ನಿರ್ಮಾಣ ಮಾಡಲು Change of Scope ನಲ್ಲಿ ಅನುವು ಮಾಡಲಾಗಿದ್ದು ರಿಯಾಯಿತಿದಾರರು ಕಾಮಗಾರಿಯನ್ನು ಪ್ರಾರಂಭಿಸಬೇಕಾಗಿರುತ್ತದೆ. |

ಕಡತ ಸಂಖ್ಯೆ: ಲೋಇ 432 ಸಿಎನ್‌ಹೆಚ್ 2022 (ಇ)

(ಸಿ.ಸಿ. ಪಾಟೀಲ)
ಲೋಕೋಪಯೋಗಿ ಸಚಿವರು